ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ತಾಳೂರು ಕರೂರು - ಸಿರಿಗೆರೆ ಕ್ರಾಸ್ ರಸ್ತೆ ಅಭಿವೃದ್ಧಿ ಕಾಮಗಾರಿ

ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

170 (1314) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಬಳ್ಳಾರಿ ಜಿಲ್ಲೆ, ಕಂಪ್ಲಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಬಳ್ಳಾರಿ ತಾಲ್ಲೂಕಿನ ತಾಳೂರು ರಸ್ತೆಯಿಂದ ಸಿರಿಗೆರೆ ಕ್ರಾಸ್‌ವರೆಗೆ

(ರಾಜ್ಯ ಹೆದ್ದಾರಿ-128) SHDP ಮೊದಲನೇ ಪ್ಯಾಕೇಜ್ ಮುಕ್ತಾಯದ ನಂತರದಿಂದ ಅಂದಾಜು 25.00 ಕಿ.ಮೀ. ಸಿರಿಗೆರೆ ಕ್ರಾಸ್‌ವರೆಗೆ ವಯಾ ತಾಳೂರು-ಕರೂರು-ದರೂರು-ಸಿರಿಗೆರೆ ಕ್ರಾಸ್ (ರಾಷ್ಟ್ರೀಯ ಹೆದ್ದಾರಿ 130ಎ)ಗೆ ಸೇರುವ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು 2019-20ನೇ ಸಾಲಿನ SHDP ಯೋಜನೆಯಡಿಯಲ್ಲಿ ಅನುಮೋದನೆ ನೀಡಲಾಗಿದೆಯೇ ;

(ಆ) ಅನುಮೋದನೆ ನೀಡಿದ್ದಲ್ಲಿ, ಈ ಕಾಮಗಾರಿಗೆ ಎಷ್ಟು ಹಣ ಬಿಡುಗಡೆಯಾಗಿದೆ; ಕಾಮಗಾರಿ ಕೆಲಸ ಯಾವ ಹಂತದಲ್ಲಿದೆ ?